All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

29.01.2025 6.40 P.M.

<><><><>

ಮುಖ್ಯಾಂಶಗಳು

- ಸಣ್ಣ ಹಣಕಾಸು ಸಂಸ್ಥೆಗಳ ದೌರ್ಜನ್ಯ ವಿಚಾರ; ನಾಳಿನ ಸಂಪುಟ ಸಭೆಯಲ್ಲಿ ವರದಿ ನೀಡಲು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತೀರ್ಮಾನ
- ಭೂ ಪರಿವರ್ತನೆ ಪ್ರಕ್ರಿಯೆ ಒಂದು ತಿಂಗಳಲ್ಲಿ ಪೂರ್ಣಗೊಳಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂದಾಯ ಅಧಿಕಾರಿಗಳಿಗೆ ಸೂಚನೆ
- ಕೆಎಫ್‌ಡಿ ವೈರಸ್ ಹರಡುವ ಎರಡು ಉಣುಗುಗಳನ್ನು ಪತ್ತೆ ಹಚ್ಚಿದ ಆರೋಗ್ಯ ಇಲಾಖೆ ಸಂಶೋಧನಾ ತಂಡ
- ವಿಜಯಪುರದ ಕೂಡ್ಗಿಯಲ್ಲಿ ಎನ್‌ಟಿಪಿಸಿಯ ಸಿಒ೨ ಬ್ಯಾಟರಿ ಶಕ್ತಿ ಆಧಾರಿತ ಸಂಗ್ರಹ ತಂತ್ರಜ್ಞಾನ ಆರಂಭ

<><><><>

ಸಣ್ಣ ಹಣಕಾಸು ಸಂಸ್ಥೆಗಳು ಸಾಲದ ಹಣ ವಸೂಲಿ ಮಾಡುವ ಸಂದರ್ಭದಲ್ಲಿ ಸಾರ್ವಜನಿಕರ ಮೇಲೆ ದೌರ್ಜನ್ಯ ಎಸಗುವುದು, ಕಿರುಕುಳ ನೀಡುವುದನ್ನು ನಿಷೇಧಿಸುವ "ಕರ್ನಾಟಕ ಮೈಕ್ರೋಫೈನಾನ್ಸ್ ಪ್ರಿವೆನ್ಷನ್ ಆಫ್ ಕೋಯೆರ್ಸಿವ್ ಆಂಡ್ ಇನ್‌ಹ್ಯೂಮನ್ ಆಕ್ಷನ್ ೨೦೨೫" ಮಸೂದೆ ಕುರಿತು ಗೃಹ ಸಚಿವ ಡಾ. ಜಿ.ಪರಮೇಶ್ವರ್, ಕಾನೂನು ಸಚಿವ ಹೆಚ್.ಕೆ.ಪಾಟೀಲ್ ಕಂದಾಯ ಮತ್ತು ಆರ್ಥಿಕ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸಣ ಹಣಕಾಸು ಸಂಸ್ಥೆಗಳು ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಇದನ್ನು ತಡೆಗಟ್ಟಲು ತ್ವರಿತವಾಗಿ ಕಾನೂನು ತರಬೇಕು ಎಂದು ಮುಖ್ಯಂಮತ್ರಿಯವರು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ನಾಳಿನ ಸಂಪುಟ ಸಭೆಯಲ್ಲಿ ವರದಿ ನೀಡಲಾಗುವುದು ಎಂದು ತಿಳಿಸಿದ್ದಾರೆ. ಸಣ್ಣ ಹಣಕಾಸು ಸಂಸ್ಥೆಗಳು ಸಾಲದ ಹಣ ವಸೂಲಿ ಮಾಡುವಾಗ ದೌರ್ಜನ್ಯ ನಡೆಸಿದರೆ, ಸ್ವಯಂ ಪ್ರೇರಿತ ದೂರು ದಾಖಲಿಸಿಕೊಳ್ಳುವಂತೆ ಪೊಲೀಸರಿಗೆ ಸೂಚಿಸಲಾಗಿದೆ ಎಂದು ಹೇಳಿದ್ದಾರೆ.

<><><><>

ಭೂ ಪರಿವರ್ತನೆ ಪ್ರಕ್ರಿಯೆಯನ್ನು ಒಂದು ತಿಂಗಳ ಒಳಗಾಗಿ ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಕಂದಾಯ ನ್ಯಾಯಾಲಯಗಳಲ್ಲಿ ಸಮಾರೋಪಾದಿಯಲ್ಲಿ ಪ್ರಕರಣಗಳ ವಿಲೇವಾರಿ ಆಗಿರುವುದಕ್ಕೆ ಮುಖ್ಯಮಂತ್ರಿ ಸಂತಸ

ವ್ಯಕ್ತಪಡಿಸಿದ್ದಾರೆ. ವಿಧಾನಸೌಧದಲ್ಲಿ ಇಂದು ನಡೆದ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಕಾಂಗ್ರೆಸ್ ಸರ್ಕಾರ ಅಧಿಕಾರ ಸ್ವೀಕರಿಸಿದಾಗ ೧೦ ಸಾವಿರಕ್ಕೂ ಹೆಚ್ಚು ಅವಧಿ ಮೀರಿದ ಪ್ರಕರಣಗಳು ಬಾಕಿ ಇದ್ದವು. ಈಗ ಕೇವಲ ೩೯೯ ಪ್ರಕರಣಗಳು ಮಾತ್ರ ತಹಶೀಲ್ದಾರ್ ನ್ಯಾಯಾಲಯಗಳಲ್ಲಿವೆ ಎಂದು ಮುಖ್ಯಮಂತ್ರಿ ಅವರಿಗೆ ದಾಖಲೆ ಸಮೇತ ಸಚಿವ ಕೃಷ್ಣಬೈರೇಗೌಡ ವಿವರಿಸಿದರು. ರಾಜ್ಯದ ಹಲವು ಪ್ರಕರಣಗಳಲ್ಲಿ ಜಮೀನು ಖಾತೆ ಇನ್ನು ನಿಧನ ಹೊಂದಿದವರ ಹೆಸರಿನಲ್ಲಿದ್ದು, ಪೌತಿ ಖಾತೆ ಅಭಿಯಾನದ ಮೂಲಕ ಹಾಲಿ ಮಾಲೀಕರ ಹೆಸರಿಗೆ ಜಮೀನು ನೋಂದಣಿ ಮಾಡುವ ಕಾರ್ಯವನ್ನು ತ್ವರಿತಗೊಳಿಸಬೇಕು ಎಂದು ಸೂಚನೆ ನೀಡಿದ್ದಾರೆ. ಇದುವರೆಗೆ ಸುಮಾರು ೮ ಕೋಟಿ ಮೂಲ ದಾಖಲೆಗಳ ಕಂಪ್ಯೂಟರೀಕರಣ ಪೂರ್ಣಗೊಳಿಸಲಾಗಿದೆ. ಎಲ್ಲಾ ೩೧ ಜಿಲ್ಲೆಗಳಲ್ಲಿ ದಾಖಲೆಗಳ ಕಂಪ್ಯೂಟರೀಕರಣ ಕಾರ್ಯ ನಡೆಯುತ್ತಿದೆ ಎಂದು ಸಭೆಯಲ್ಲಿ ತಿಳಿಸಲಾಗಿದೆ.

<><><>

ಮೈಸೂರು ಅರಣ್ಯ ವೃತ್ತದಲ್ಲಿ ಆನೆ ಹಾವಳಿ ಹೆಚ್ಚಿರುವ ಪ್ರದೇಶಗಳಲ್ಲಿ ಆನೆ ಕಂದಕಗಳ ಮತ್ತು ಅಳವಡಿಸಲಾದ ಸೌರ ಬೇಲಿಗಳ ಸಮರ್ಪಕ ನಿರ್ವಹಣೆ ಮಾಡಿ, ವರದಿ ಸಲ್ಲಿಸುವಂತೆ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ. ಮೈಸೂರು ಅರಣ್ಯ ಭವನದಲ್ಲಿಂದು ಅರಣ್ಯ ಮತ್ತು ಪರಿಸರ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾನವ-ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕಾಗಿ ಕಾಡಿನಂಚಿನಲ್ಲಿ ಬಿದಿರು ಬೆಳೆಸುವುದು ಮತ್ತು ಅರಣ್ಯದೊಳಗಿನ ನೀರು ಗುಂಡಿಗಳು ಬತ್ತದಂತೆ ಸೌರ ಪಂಪ್ ಸೆಟ್ ಮೂಲಕ ಕೊಳವೆ ಬಾವಿಗಳಿಂದ ನೀರು ಹರಿಸುವುದು ಸೇರಿದಂತೆ ಎಲ್ಲ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು. ಮೈಸೂರು ನಗರವನ್ನು ಏಕ ಬಳಕೆ ಪ್ಲಾಸ್ಟಿಕ್ ಮುಕ್ತ ನಗರ ಎಂದು ಘೋಷಿಸಲಾಗಿದ್ದು, ನಗರದಲ್ಲಿ ನಿಯಮಿತವಾಗಿ ತಪಾಸಣೆ ನಡೆಸಿ ದಂಡ ವಿಧಿಸುವಂತೆ ತಿಳಿಸಿದ್ದಾರೆ.

<><><>

ಪಶ್ಚಿಮಘಟ್ಟದ ಕಾಡಿನಲ್ಲಿ ಕಂಡುಬರುವ ೩೨ಕ್ಕೂ ಅಧಿಕ ಜಾತಿಯ ಕೆಎಫ್‌ಡಿ ವೈರಸ್ ಹರಡಬಲ್ಲ ಉಣ್ಣೆಗಳಲ್ಲಿ ಎರಡು ಜಾತಿಯ ಉಣ್ಣೆಗಳು ಅನುವಂಶಿಕವಾಗಿ ಕೆಎಫ್‌ಡಿ ವೈರಸ್ ಅನ್ನು ಮತ್ತೊಂದು ಪೀಳಿಗೆಗೆ ವರ್ಗಾಯಿಸುತ್ತಿರುವುದು ಸಂಶೋಧನೆಯಿಂದ ದೃಢಪಟ್ಟಿದೆ. ಈ ಸಂಶೋಧನೆಯು ಕೆಎಫ್‌ಡಿ ನಿಯಂತ್ರಣದಲ್ಲಿ ಆರೋಗ್ಯ ಇಲಾಖೆಗೆ ಹೊಸ ಭರವಸೆ ನೀಡಿದೆ. ಉಣುಗು ನಿಯಂತ್ರಣವೇ ಕೆಎಫ್‌ಡಿ ನಿಯಂತ್ರಣದ ಮೊದಲ ಭಾಗವಾಗಲಿದೆ. ಕೆಎಫ್‌ಡಿ ಕುರಿತಂತೆ ಕಳೆದ ೬ ವರ್ಷದಿಂದ ರಾಜ್ಯ ಅರೋಗ್ಯ ಇಲಾಖೆಯು ಸೇರಿದಂತೆ ಐಸಿಎಂಆರ್, ಐಸಿಎಆರ್ ಸಂಸ್ಥೆಗಳ ಸಹಯೋಗದಲ್ಲಿ ಸಂಶೋಧನೆ ನಡೆಸುತ್ತಿರುವ "ಮಂಕಿ ಫೀವರ್ ರಿಸ್ಕ್" ತಂಡ ಉಣುಗುಗಳ ಬಗ್ಗೆ ಅಧ್ಯಯನ ನಡೆಸುತ್ತಾ ಬಂದಿದೆ. ಕೆಎಫ್‌ಡಿ ವೈರಸ್ ಪತ್ತೆಯಾಗಿ ೬೦ ವರ್ಷವಾಗಿದ್ದರೂ ಅದನ್ನು ಸಂಪೂರ್ಣವಾಗಿ ಅಧ್ಯಯನ ಮಾಡಲು ಆಗಿರಲಿಲ್ಲ. ಮಲೆನಾಡಿನ ಕಾಡುಗಳಲ್ಲಿ ಕಂಡುಬರುವ ಹೆಮಾಫೆಸಾಲಿಸ್ ಮತ್ತು ರೈಪಿಸೆಫಾಲಸ್ ಹೆಸರಿನ ಎರಡು ಜಾತಿಯ ಉಣುಗು ವೈರಸ್ ಅನ್ನು

ತನ್ನ ಮಕ್ಕಳಿಗೂ ವರ್ಗಾಯಿಸುತ್ತಿದೆ ಎಂದು ಸಂಶೋಧನೆಯಿಂದ ತಿಳಿದುಬಂದಿದೆ ಎಂದು ಆಕಾಶವಾಣಿಗೆ ವಿಜ್ಞಾನಿ ಡಾ.ದರ್ಶನ್ ನಾರಾಯಣ್ ತಿಳಿಸಿದ್ದಾರೆ. .

<><><><>

ಭಾರತದ ಅತಿ ದೊಡ್ಡ ಸಂಯೋಜಿತ ವಿದ್ಯುತ್ ಸಂಸ್ಥೆ-ಎನ್‌ಟಿಪಿಸಿ ಲಿಮಿಟೆಡ್ ಸಿಒ೨ ಬ್ಯಾಟರಿ ಶಕ್ತಿ ಆಧಾರಿತ ಸಂಗ್ರಹ ತಂತ್ರಜ್ಞಾನವನ್ನು ವಿಜಯಪುರ ಜಿಲ್ಲೆಯ ಬಸವನಬಾಗೆವಾಡಿ ತಾಲೂಕಿನ ಕೂಡ್ಗಿಯಲ್ಲಿ ಪ್ರಾರಂಭಿಸುವುದಾಗಿ ಘೋಷಿಸಿದೆ. ಇದನ್ನು ತ್ರಿವೇಣಿ ಟರ್ಬೈನ್ ಲಿಮಿಟೆಡ್ ಮತ್ತು ಇಟಲಿಯ ಎನರ್ಜಿ ಡೋಮ್ ಸಹಯೋಗದೊಂದಿಗೆ ಆರಂಭಿಸಲಾಗುತ್ತಿದೆ. ಪ್ರತಿ ಗಂಟೆಗೆ ೧೬೦ ಮೆಗಾವ್ಯಾಟ್ ಶಕ್ತಿ ಸಾಮರ್ಥ್ಯ ಹೊಂದಿರುವ ಸಿಒ೨ ಬ್ಯಾಟರಿಯನ್ನು ಇದು ಹೊಂದಿದೆ. ಇದು ಸುಸ್ಥಿರ ಹಾಗೂ ಹೊಸ ಇಂಧನ ಪರಿಹಾರಗಳತ್ತ ಮಹತ್ವದ ಮೈಲಿಗಲ್ಲು ಸಾಧಿಸಲಿದೆ. ಈ ಬ್ಯಾಟರಿಯು ಕೇಂದ್ರ ಸರ್ಕಾರದ ಮೇಕ್-ಇನ್-ಇಂಡಿಯಾ ಮತ್ತು ಆತ್ಮನಿರ್ಭರ ಭಾರತ್ ಉಪಕ್ರಮಗಳನ್ನು ಸಾಕಾರಗೊಳಿಸಲಿದೆ.  ಈ ಕುರಿತು ನವದೆಹಲಿಯಲ್ಲಿ ಪ್ರತಿಕ್ರಿಯಿಸಿರುವ ಎನ್‌ಟಿಪಿಸಿ ಅಧ್ಯಕ್ಷ ಗುರುದೀಪ್ ಸಿಂಗ್, ಇದು ದೀರ್ಘಾವಧಿಯ ಶಕ್ತಿ ಸಂಗ್ರಹಣೆ ಕ್ಷೇತ್ರದಲ್ಲಿ ಗಣನೀಯ ಪ್ರಗತಿಗೆ ನಾಂದಿ ಹಾಡಲಿದೆ ಎಂದು ತಿಳಿಸಿದ್ದಾರೆ.

<><><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನ ಮಹಾಕುಂಭ ಮೇಳದಲ್ಲಿ ಭಕ್ತರ ಜನದಟ್ಟಣೆಯಿಂದ ಕಾಲ್ತುಳಿತ ಉಂಟಾಗಿ ಬೆಳಗಾವಿಯ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸ್ಪಷ್ಟಪಡಿಸಿದ್ದಾರೆ.  ಕುಂಭ ಮೇಳದ ಕಾಲ್ತುಳಿತಕ್ಕೆ ಸಿಲುಕಿದ್ದ ಇವರನ್ನು ಪ್ರಯಾಗರಾಜ್ ನ ಖಾಸಗಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಿಸದೆ ಅಸುನೀಗಿದ್ದಾರೆ. ಇದೇ ೨೬ ರಂದು ಖಾಸಗಿ ಸಾರಿಗೆ ಸಂಸ್ಥೆಯ ಮೂಲಕ ೧೩ ಜನರ ತಂಡ ಕುಂಭಮೇಳಕ್ಕೆ ತೆರಳಿತ್ತು ಎಂದು ಅವರು ವಿವರ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಲ್ತುಳಿತದಲ್ಲಿ ಗಾಯಗೊಂಡಿರುವ ರಾಜ್ಯದ ಯಾತ್ರಿಗಳನ್ನು ಸುರಕ್ಷಿತವಾಗಿ ಕರೆ ತರಲಾಗುವುದು ಎಂದು ತಿಳಿಸಿದ್ದಾರೆ. ಕುಂಭಮೇಳದಲ್ಲಿ ಪಾಲ್ಗೊಂಡಿರುವ ಕನ್ನಡಿಗರು ಜಾಗರೂಕತೆಯಿಂದ ಇರಿ ಎಂದು ತಿಳಿಸಿದ್ದಾರೆ.

<><><><>

ಬೆಂಗಳೂರು ನಗರ ವಿಶ್ವವಿದ್ಯಾಲಯದ ನೂತನ ಶೈಕ್ಷಣಿಕ ವಿಭಾಗದಲ್ಲಿ ಮಹಾತ್ಮಗಾಂಧಿ ಅಧ್ಯಯನ ಕೇಂದ್ರ ಸ್ಥಾಪಿಸಲಾಗಿದೆ. ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಸಮ್ಮುಖದಲ್ಲಿ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷರಾದ ಡಾ.ವೂಡೇ ಪಿ. ಕೃಷ್ಣ ಇಂದು ವಿಧ್ಯುಕ್ತವಾಗಿ ಉದ್ಘಾಟಿಸಿದರು. ಇದೇ ವೇಳೆ ಮಾತನಾಡಿದ ಅವರು, ಗಾಂಧೀಜಿ ಅವರ ತತ್ವಾದರ್ಶಗಳು ಮತ್ತು ಮೌಲ್ಯಗಳ ಪುನರ್ ಸ್ಥಾಪನೆಗೆ ಕಾರ್ಯೋನ್ಮುಖವಾಗುವಂತೆ ಯುವ ಪೀಳಿಗೆಗೆ ಮನವಿ ಮಾಡಿದರು. ಕುಲಪತಿ ಪ್ರೊ.ಲಿಂಗರಾಜ ಗಾಂಧಿ ಮಾತನಾಡಿ, ಗಾಂಧೀಜಿ ಅವರ ಜೀವನಾದರ್ಶಗಳು ಅತ್ಯಂತ ಮಹತ್ವದಾಗಿದೆ ಎಂದು ಹೇಳಿದರು.

<><><>

ಕರ್ನಾಟಕ ಸರ್ವೋದಯ ಮಂಡಲ ಇಂದು ಮತ್ತು ನಾಳೆ ಎರಡು ದಿನಗಳ ಕಾಲ ಶಿವಮೊಗ್ಗದ ಶಿಕಾರಿಪುರ ತಾಲ್ಲೂಕು ಈಸೂರು ಹುತಾತ್ಮರ ಸ್ಮಾರಕದಲ್ಲಿ ರಾಷ್ಟ್ರೀಯ ಸಮಾವೇಶ ಮತ್ತು ಹುತಾತ್ಮರ ದಿನ ಆಚರಿಸುತ್ತಿದೆ. ಬ್ರಿಟಿಷರೇ ಭಾರತ ಬಿಟ್ಟು ತೊಲಗಿ ಚಳವಳಿಯಲ್ಲಿ ಈಸೂರು ಗ್ರಾಮದ ವೀರ ಹೋರಾಟಗಾರರು ಸಕ್ರಿಯವಾಗಿ ಭಾಗವಹಿಸಿದ್ದರು. ೧೯೪೨ರ ಸೆಪ್ಟೆಂಬರ್ ೨೫ರಂದು ಗ್ರಾಮದ ವೀರಭದ್ರಸ್ವಾಮಿ ದೇವಾಲಯದ ಮೇಲೆ ತ್ರಿವರ್ಣಧ್ವಜ ಹಾರಿಸಿ ತಮ್ಮ ಗ್ರಾಮ ಸ್ವತಂತ್ರ್ಯ ಗಳಿಸಿತು. ಎಂಬುದನ್ನು ತೋರಿಸಿಕೊಟ್ಟರು. ಈ ಮೂಲಕ ಈಸೂರಿನ ಕೀರ್ತಿ ದೇಶಾದ್ಯಂತ ಪಸರಿಸಿತ್ತು. ಒಂದು ನೂರು ಸರ್ವೋದಯ ಕಾರ್ಯಕರ್ತರು ಈ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆ ಇದೆ.

<><><>

ಸಾಂಪ್ರದಾಯಿಕ ವಿಧಾನದಲ್ಲಿ ಮೀನುಗಾರಿಕೆ ನಡೆಸುತ್ತಿರುವ ಮೀನುಗಾರರನ್ನು ಒಳಗೊಂಡ ಗ್ರಾಮಗಳ ಸುಧಾರಣೆಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ 'ಕರಾವಳಿ ಸ್ಥಿತಿಸ್ಥಾಪಕ ಗ್ರಾಮ' ಯೋಜನೆಗೆ ದೇಶದ ನೂರು ಗ್ರಾಮಗಳನ್ನು ಆಯ್ಕೆ ಮಾಡಲಾಗಿದೆ. ಅವುಗಳ ಪೈಕಿ ಉತ್ತರಕನ್ನಡ ಜಿಲ್ಲೆಯ ಎರಡು ಗ್ರಾಮಗಳು ಸೇರಿವೆ. ಈ ಬಗ್ಗೆ ಆಕಾಶವಾಣಿಯೊಂದಿಗೆ ಮಾತನಾಡಿದ ಮೀನುಗಾರಿಕಾ ಇಲಾಖೆಯ ಜಂಟಿ ನಿರ್ದೇಶಕ ಬಬಿನ್ ಬೊಪಣ್ಣ, ಸಾಂಪ್ರದಾಯಿಕ ಮೀನುಗಾರರನ್ನು ಒಳಗೊಂಡಿರುವ ಗ್ರಾಮದ ಸುಧಾರಣೆಗೆ ಯೋಜನೆ ನೆರವಾಗಲಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಬಬಿನ್ ಬೊಪಣ್ಣ

<><><>

ಸಂಕ್ಷಿಪ್ತ ಸುದ್ದಿ

- ಶಾಲಾ ಮಕ್ಕಳಿಂದ ಪೋಷಕರಿಗೆ ದುಶ್ಚಟಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವಂತಹ ಪತ್ರಗಳನ್ನು ಬರೆಸುವ ಕಾರ್ಯಕ್ರಮ ಯೋಜಿಸಿ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ ಹೇಳಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>